## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 771 (934) |
| ಸದಸ್ಯರ ಹೆಸರು | : ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 15-12-2025 |
| ಉತ್ತರಿಸುವ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2025-26 ಶೈಕ್ಷಣಿಕ ವರ್ಷ ಆರಂಭವಾಗಿದ್ದರೂ ಸಹ ಕೊಪ್ಪಳ ಜಿಲ್ಲೆಯ ಸರ್ಕಾರಿ ಪಿ.ಯು ಕಾಲೇಜುಗಳಲ್ಲಿ ಶೇಕಡಾ 50 ಕ್ಕೂ ಹೆಚ್ಚು ಉಪನ್ಯಾಸಕರ ಹುದ್ದೆಗಳು ಖಾಲಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)</td><td>ಬಂದಿದೆ.<br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಎದುರಾಗಿ ಕಾರ್ಯಭಾರ ಕಡಿಮೆ ಇರುವ ಉಪನ್ಯಾಸಕರನ್ನು ನಿಯೋಜಿಸಲಾಗಿದೆ ಹಾಗೂ ನಿಯೋಜನೆ ಮಾಡಲು ಸಾಧ್ಯವಾಗದ ಕಡೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಆಯಾ ಕಾಲೇಜಿನ ಪ್ರಾಂಶುಪಾಲರುಗಳಿಗೆ ಸೂಚಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ.</td></tr>
<tr><td>(ಆ)</td><td>ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಅನುದಾನಿತ, ಖಾಸಗಿ ಪಿ.ಯು ಕಾಲೇಜುಗಳಿವೆ; ಒಟ್ಟು ಎಷ್ಟು ಪದವಿಪೂರ್ವ ಉಪನ್ಯಾಸಕರ ಹುದ್ದೆಗಳಿಗೆ ಸರ್ಕಾರವು ಅನುಮೋದನೆ ನೀಡಿರುತ್ತದೆ: ಈ ಪೈಕಿ ಎಷ್ಟು ಜನ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ: (ವಿವರ ನೀಡುವುದು)</td><td>ಕೊಪ್ಪಳ ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 50.<br>ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 09.<br>ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 43.<br>ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಹುದ್ದೆಗಳ ವಿವರ;<br>
<table>
<tr><th colspan="3">ಸರ್ಕಾರಿ ಪದವಿ ಪೂರ್ವ ಕಾಲೇಜು</th><th colspan="3">ಅನುದಾನಿತ ಪದವಿ ಪೂರ್ವ ಕಾಲೇಜು</th></tr>
<tr><td>ಮಂಜೂರು</td><td>ಭರ್ತಿ</td><td>ಖಾಲಿ</td><td>ಮಂಜೂರು</td><td>ಭರ್ತಿ</td><td>ಖಾಲಿ</td></tr>
<tr><td>415</td><td>181</td><td>234</td><td>57</td><td>29</td><td>28</td></tr>
</table>
</td></tr>
<tr><td>ಇ)</td><td>ಮಂಜೂರಾದ ಉಪನ್ಯಾಸಕರ ಹುದ್ದೆಗಳ ಪೈಕಿ ಶೇ. 50% ರಷ್ಟು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಉಳಿದ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ, ಈ ಬಗ್ಗೆ ಸರ್ಕಾರ ನೀಡುವ ಸ್ಪಷ್ಟನೆ ಏನು: (ವಿವರ</td><td>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಇತರೆ ಉಳಿಕೆ ಮೂಲ ವೃಂದದ ಒಟ್ಟು 778 ಉಪನ್ಯಾಸಕರ ಹುದ್ದೆಗಳು ಹಾಗೂ ಕಲ್ಯಾಣ-ಕರ್ನಾಟಕ ವೃಂದದ 36 ಹುದ್ದೆಗಳು, ಹೀಗೆ ಒಟ್ಟು 814 ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರದ ಅನುಮತಿಯನ್ನು ನೀಡಲಾಗಿದ್ದು, ಉಪನ್ಯಾಸಕರ ಹುದ್ದೆಯ ನೇರ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು</td></tr>
</table>

| | | |
|---|---|---|
| | ನೀಡುವುದು) | ನಡೆಸಲು ಆಯ್ಕೆ ಪ್ರಾಧಿಕಾರವನ್ನು ನಿಗದಿಪಡಿಸಲು ಕ್ರಮವಹಿಸಲಾಗುತ್ತಿದೆ.<br>ಕಲ್ಯಾಣ ಕರ್ನಾಟಕದ ಅಂದರೆ ಹೈದರಾಬಾದ್-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯಮಟ್ಟದ ಸ್ಥಳೀಯ ವೃಂದ ಒಳಗೊಂಡಂತೆ ಅವಶ್ಯಕವಾಗಿ ನೇಮಕಾತಿ ಮಾಡಬೇಕಾದ ನೇರ ನೇಮಕಾತಿ ಕೋಟಾದ ಒಟ್ಟು 405 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಈ) | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಬಿ) ಅನುದಾನದಡಿಯಲ್ಲಿ ಎಷ್ಟು ಕಾಲೇಜುಗಳಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ; ಎಷ್ಟು ವರ್ಷಗಳವರೆಗೆ ಆರ್ಥಿಕ ನೆರವು ನೀಡಲಾಗುವುದು; (ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ವತಿಯಿಂದ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 09 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ.<br>ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ವತಿಯಿಂದ ಮಂಜೂರು ಮಾಡಲಾದ ಕಾಲೇಜುಗಳಿಗೆ ಪ್ರಾರಂಭವಾದ ವರ್ಷದಿಂದ 03 ವರ್ಷಗಳವರೆಗೆ ಆರ್ಥಿಕ ನೆರವು ನೀಡಲಾಗುತ್ತಿದೆ. |
| ಉ) | ಸದರಿ ಕಾಲೇಜುಗಳಲ್ಲಿ ಸಿಬ್ಬಂದಿ ನೇಮಕಾತಿ ಬಗ್ಗೆ ಸ್ಪಷ್ಟ ನೀತಿ/ನಿಯಮಾವಳಿಗಳು ಇಲ್ಲದ ಕಾರಣ ಬೋಧನಾ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆಕೆಆರ್‌ಡಿಬಿ ಅನುದಾನದ ಕಾಲಾವಧಿ ಮೂರೇ ವರ್ಷಗಳಾಗಿದ್ದು, ನಂತರ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಾಗುವುದು? (ವಿವರ ನೀಡುವುದು) | ಸದರಿ ಕಾಲೇಜುಗಳಲ್ಲಿನ ಉಪನ್ಯಾಸಕರ ತಾತ್ಕಾಲಿಕ ನೇಮಕಾತಿಯನ್ನು ಇಲಾಖೆಯು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯಂತೆ ಕೈಗೊಳ್ಳಲಾಗಿರುತ್ತದೆ.<br>ಕೆಕೆಆರ್‌ಡಿಬಿ ಅನುದಾನದ ಕಾಲಾವಧಿ ಮೂರು ವರ್ಷಗಳ ನಂತರ, ಖಾಲಿ ಇರುವ ಹುದ್ದೆಗಳಿಗೆ ಹೊಸದಾಗಿ ನೇಮಕಾತಿ ಮೂಲಕ/ವರ್ಗಾವಣೆ ಮೂಲಕ ಅಥವಾ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು. |

ಸಂಖ್ಯೆ: ಇಪಿ 409 ಡಿಜಿಡಬ್ಲ್ಯೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು